ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

DTE-ADMI0ACM2/115/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು - 560 001
ದಿನಾಂಕ:18-09-2021.

-:: ಸುತ್ತೋಲೆ ::-

ವಿಷಯ: ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಈ ಸಂಸ್ಥೆಯಲ್ಲಿನ ಅಂತರಾಷ್ಟ್ರೀಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ ನಡೆಸಲಾಗುವ (International Twinning Program) Cyber Physical System & Security ಮತ್ತು Travel and Tourism ಕೋರ್ಸುಗಳಿಗೆ ಪ್ರವೇಶ ನೀಡುವ ಬಗ್ಗೆ.

ಉಲ್ಲೇಖ:- ಈ ಕಛೇರಿ ಸಮಸಂಖ್ಯೆ ಪ್ರವೇಶಾಧಿಸೂಚನೆ ದಿ:11-08-2021 ಮತ್ತು 12-08-2021.

-********-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಈ ಕಛೇರಿ ಪ್ರವೇಶಾಧಿಸೂಚನೆಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಡಿಪ್ಲೋಮಾ ಇಂಜಿನಿಯರಿಂಗ್ ಮತ್ತು ನಾನ್-ಇಂಜಿನಿಯರಿಂಗ್ ಕೋರ್ಸುಗಳ ಪ್ರಥಮ ವರ್ಷದ ತರಗತಿಗಳಿಗೆ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಪ್ರಸ್ತುತ ಬೆಂಗಳೂರಿನ ಎಸ್.ಜೆ.ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಅಂತರಾಷ್ಟ್ರೀಯ ವಿಶ್ವವಿದ್ಯಾಲಯದ ಸಹಯೋಗದೊಂದಿಗೆ Cyber Physical Systems & Security ಮತ್ತು Travel and Tourism ಕೋರ್ಸುಗಳನ್ನು ಪ್ರಾರಂಭಿಸಲಾಗಿದ್ದು, ಸದರಿ ಕೋರ್ಸುಗಳಿಗೆ ಪ್ರವೇಶವನ್ನು ಪಡೆಯಲು **2020-21ನೇ ಸಾಲಿನಲ್ಲಿ ಮಾತ್ರ ಎಸ್ ಎಸ್ ಎಲ್ ಸಿ / ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ** ಉಲ್ಲೇಖಿತ ದಿ:11-08-2021 ಮತ್ತು 12-08-2021ರ ಈ ಕಛೇರಿ ಪ್ರವೇಶಾಧಿಸೂಚನೆಗಳನ್ವಯ ನಿಗಧಿತ ಅವಧಿಯಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮಾತ್ರ ಪರಿಗಣನೆಗೆ ಅರ್ಹರಾಗಿರುತ್ತಾರೆ.

ಈ ಹಿನ್ನಲೆಯಲ್ಲಿ ಈಗಾಗಲೇ ಅರ್ಜಿ ಸಲ್ಲಿಸಿ, ವಿವಿಧ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳು ಹಾಗೂ ಅರ್ಜಿ ಸಲ್ಲಿಸಿ ಪ್ರವೇಶ ಪಡೆಯದಿರುವ ವಿದ್ಯಾರ್ಥಿಗಳು ಮೇಲ್ಕಂಡ ಎರಡು ಕೋರ್ಸುಗಳಿಗೆ ಪ್ರವೇಶ ಪಡೆಯಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ತಾಂತ್ರಿಕ ಶಿಕ್ಷಣ ಇಲಾಖೆಯ ಅಧಿಕೃತ ವೆಬ್ ಸೈಟ್ **dtetech.karnataka.gov.in/kartechnical** ನಲ್ಲಿ ಪ್ರಕಟಿಸಿರುವ ಅರ್ಜಿ ನಮೂನೆಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಯನ್ನು ಈಗಾಗಲೇ ಉಲ್ಲೇಖಿತ ಪ್ರವೇಶಾಧಿಸೂಚನೆಗಳನ್ವಯ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶಕ್ಕಾಗಿ ಅರ್ಜಿ ಸಲ್ಲಿಸಿರುವ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ ನೇರವಾಗಿ ಈ ಕೆಳಗೆ ನಿಗಧಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಸಲ್ಲಿಸಲು ತಿಳಿಸಲಾಗಿದೆ.

ಮೇಲ್ಕಂಡ ಕೋರ್ಸುಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಪ್ರವೇಶದ ಸಮಯದಲ್ಲಿ ರೂ.30/-ಗಳನ್ನು ಪ್ರವೇಶ ಶುಲ್ಕವಾಗಿ ಪಾವತಿಸುವುದು ಕಡ್ಡಾಯವಾಗಿರುತ್ತದೆ.

Scanned with CamScanner

| | ಪ್ರಾರಂಭ ದಿನಾಂಕ | ಕೊನೆಯ ದಿನಾಂಕ |
|---|---|---|
| ಇಲಾಖೆಯ ಅಧೀಕೃತ ವೆಬ್‌ಸೈಟ್‌ನಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು, ಭರ್ತಿ ಮಾಡಿದ ಸರ್ಜಿಯನ್ನು ಸಂಬಂಧಪಟ್ಟ ಸಂಸ್ಥೆಗಳ ಪ್ರಾಂಶುಪಾಲರಿಗೆ ಸಲ್ಲಿಸಲು ಪ್ರಾರಂಭ ಮತ್ತು ಕೊನೆಯ ದಿನಾಂಕ: | 20-09-2021 | 24-09-2021ರ |
| ಆಯ್ಕೆಯಾದ ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಪ್ರಕಟಿಸುವ ದಿನಾಂಕ: | 25-09-2021 | |
| ಮೊದಲ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ ಪ್ರವೇಶ ಪಡೆಯಲು ಕೊನೆಯ ದಿನಾಂಕ: | 26-09-2021 | 27-09-2021 |
| ಭರ್ತಿ ಆಗದೇ ಉಳಿಕೆ ಸೀಟುಗಳಿಗೆ (waitlist candidate) ಎರಡನೇ ಪಟ್ಟಿ ಪ್ರಕಟಿಸುವ ದಿನಾಂಕ: | 28-09-20210 | |
| ಎರಡನೇ ಪಟ್ಟಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಎಸ್.ಜೆ ಸರ್ಕಾರಿ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ ಪ್ರವೇಶ ಪಡೆಯಲು ಕೊನೆಯ ದಿನಾಂಕ: | 29-09-2021 | 30-09-2021 |

ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳು ಈ ಸುತ್ತೋಲೆ ಅನ್ವಯ ಸರ್ಕಾರಿ ಎಸ್.ಜೆ ಪಾಲಿಟೆಕ್ನಿಕ್, ಬೆಂಗಳೂರು ಇಲ್ಲಿ 2021-22ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಪ್ರಾರಂಭಿಸಲಾಗಿರುವ Cyber Physical Systems & Security ಮತ್ತು Travel and Tourism ಕೋರ್ಸುಗಳಿಗೆ, ಪ್ರವೇಶ ಕೋರಿ ಸ್ವೀಕೃತವಾಗುವ ಅರ್ಜಿಗಳಲ್ಲಿನ ಮಾಹಿತಿಯನ್ನು ಆಯಾ ದಿನವೇ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀಕೃತ ವೆಬ್ ಸೈಟ್ **dtetech.karnataka.gov.in/kartechnical** ನಲ್ಲಿಯೇ ದಾಖಲಿಸಲು ಸೂಚಿಸಿದೆ.

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

**ಗೆ,**

| | |
|---|---|
| ***ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳಿಗೆ*** – | ಮಾಹಿತಿಗಾಗಿ & ಮುಂದಿನ ಅಗತ್ಯ ಕ್ರಮಕ್ಕಾಗಿ ಹಾಗೂ ಸಂಸ್ಥೆಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮತ್ತು ಪೋಷಕರ ಗಮನಕ್ಕೆ ಪ್ರಕಟಿಸುವುದು. |

<u>ಪ್ರತಿ ಮಾಹಿತಿಗಾಗಿ:-</u>

1) ಆಯುಕ್ತರ ಆಪ್ತಶಾಖೆಗೆ.
2) ನಿರ್ದೇಶಕರ ಆಪ್ತಶಾಖೆಗೆ.
3) ಇಲಾಖೆಯ ಎಲ್ಲಾ ಜಂಟಿ ನಿರ್ದೇಶಕರುಗಳಿಗೆ.
4) ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ,
5) ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು,
6) ಎಸ್‌ಟಿಎಲ್, ಡಿವಿಪಿ(1) ಮತ್ತು ಡಿವಿಪಿ(2) ವಿಭಾಗಕ್ಕೆ.
7) ಇ-ಆಡಳಿತ ವಿಭಾಗಕ್ಕೆ – ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
8) ಕಡತಕ್ಕೆ.

Scanned with CamScanner